ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ:105:ಪೂ.ಭೇ:2016-17:ತವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 22.10.2016.

# ಸುತ್ತೋಲೆ

**ವಿಷಯ:** ಇಲಾಖಾ ವ್ಯಾಪ್ತಿಯ ಕಛೇರಿ ಮತ್ತು ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಪೂರ್ವಾನುಮತಿ ಪಡೆದು ಅಧಿಕಾರಿಗಳನ್ನು ಭೇಟಿ ಮಾಡುವ ಬಗ್ಗೆ

**ಉಲ್ಲೇಖ:** ಮಾನ್ಯ ಆಯುಕ್ತರ ಟಿಪ್ಪಣಿ ಸಂಖ್ಯೆ:ಕಾಶಿಆ:ಆಆಶಾ:01:2016-17, ದಿ: 13.10.2016

** ** **

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಮತ್ತು ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು/ನೌಕರರು(ಬೋಧಕ/ಬೋಧಕೇತರ/ಗ್ರೂಪ್ "ಡಿ" ನೌಕರರನ್ನು ಒಳಗೊಂಡಂತೆ) ಸಕಾರಣವಿಲ್ಲದೆ ಮತ್ತು ಅನಗತ್ಯವಾಗಿ ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ಮತ್ತು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳಲ್ಲಿನ ಅಧಿಕಾರಿಗಳನ್ನು ಭೇಟಿ ನೀಡುತ್ತಿರುವುದು ಕಂಡುಬಂದಿರುತ್ತದೆ. ನೌಕರರ ಈ ನಡವಳಿಕೆಯಿಂದ ಕಛೇರಿ ಮತ್ತು ಕಾಲೇಜುಗಳಲ್ಲಿನ ಕೆಲಸ ಕಾರ್ಯಗಳಿಗೆ ತೊಂದರೆಯುಂಟಾಗುತ್ತಿರುವುದು ಗಮನಕ್ಕೆ ಬಂದಿರುತ್ತದೆ.

ಆದಕಾರಣ ಇಲಾಖಾ ವ್ಯಾಪ್ತಿಯ ಕಛೇರಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು (ಬೋಧಕ/ಬೋಧಕೇತರ/ಗ್ರೂಪ್ "ಡಿ" ನೌಕರರನ್ನು ಒಳಗೊಂಡಂತೆ) ಇನ್ನು ಮುಂದೆ ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ಮತ್ತು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳಲ್ಲಿನ ಅಧಿಕಾರಿಗಳನ್ನು ಭೇಟಿ ಮಾಡುವ ಪೂರ್ವದಲ್ಲಿ, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು, ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು ಸಂಬಂಧಪಟ್ಟ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರವರಿಂದ ಹಾಗೂ ಉಪನ್ಯಾಸಕರು ಮತ್ತು ಸಿಬ್ಬಂದಿಯವರು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಂದ ಅನುಮತಿ ಮತ್ತು ರಜೆಯನ್ನು ಪಡೆದು ಭೇಟಿಯಾಗುವ ಅಧಿಕಾರಿಗಳಿಗೆ ಅನುಮತಿ ಪತ್ರವನ್ನು ತೋರಿಸಲು ಸೂಚಿಸಲಾಗಿದೆ. ತಪ್ಪಿದ್ದಲ್ಲಿ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957, ಮತ್ತು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 106ಎ ರಡಿ ಕ್ರಮ ವಹಿಸಲಾಗುವುದು ತಿಳಿಸಲಾಗಿದೆ.

**(ಆಯುಕ್ತರ ಟಿಪ್ಪಣಿ ಆದೇಶದ ಮೇರೆಗೆ)**

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

***ಇವರಿಗೆ:***

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಮತ್ತು ಕಾನೂನು ಕಾಲೇಜುಗಳ ಪ್ರಾಂಶುಪಾಲರಿಗೆ-ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

3) ಎಲ್ಲಾ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರಿಗೆ-ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
4) ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು ಇಲ್ಲಿನ ಎಲ್ಲಾ ಅಧಿಕಾರಿಗಳಿಗೆ/ಅಧೀಕ್ಷಕರುಗಳಿಗೆ – ಅಗತ್ಯ ಕ್ರಮಕ್ಕಾಗಿ.

***ಪ್ರತಿ:-***

1) ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು ಇಲ್ಲಿನ ಎಲ್ಲಾ ಅಧಿಕಾರಿಗಳ ಆಪ್ತಶಾಖೆಗೆ-ಮಾಹಿತಿಗಾಗಿ
2) ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು ( ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳುವುದು)
3) ಕಛೇರಿ ಪ್ರತಿ.